ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ

ಜಿಲ್ಲಾಡಳಿತ ಭವನ, ಶಿಡ್ಲಘಟ್ಟ ರಸ್ತೆ
ಇ-ಮೇಲ್: ceo_ckbpur-ka@nic.in

ದೂರವಾಣಿ: 08156-277011
ಫ್ಯಾಕ್ಸ್: 08156-277011

ಸಂಖ್ಯೆ: ಜಿಪಂಚಿ/ಅಭಿವೃದ್ಧಿ/ಎಸ್.ಬಿ.ಎಂ/ಸಿಆರ್-12/2024-25

ದಿನಾಂಕ: 06.06.2024

**ಅತೀ ಜರೂರು**

ರವರಿಗೆ,

ಕಾರ್ಯನಿರ್ವಾಹಕ ಅಧಿಕಾರಿ,
ತಾಲ್ಲೂಕು ಪಂಚಾಯಿತಿ, ಬಾಗೇಪಲ್ಲಿ,
ಚಿಕ್ಕಬಳ್ಳಾಪುರ, ಚಿಂತಾಮಣಿ, ಗೌರಿಬಿದನೂರು,
ಗುಡಿಬಂಡೆ ಹಾಗೂ ಶಿಡ್ಲಘಟ್ಟ.

ಮಾನ್ಯರೇ,

**ವಿಷಯ:** ತ್ಯಾಜ್ಯ ನಿರ್ವಹಣಾ ಘಟಕಗಳ ಮೂಲಕ ಸಮರ್ಪಕ ಕಸ ವಿಲೇವಾರಿ/ ನಿರ್ವಹಣೆ ಮಾಡುವ ಬಗ್ಗೆ.

**ಉಲ್ಲೇಖ:** ಮುಖ್ಯ ಕಾರ್ಯದರ್ಶಿ, ಟಿಪ್ಪಣಿ ಪತ್ರದ ಸಂಖ್ಯೆ: ಮುಕಾ:7919580:2024 ದಿನಾಂಕ: 03.06.2024.

*****

ಮಾನ್ಯ ಮುಖ್ಯಮಂತ್ರಿಯವರು ತಮ್ಮ ಜಿಲ್ಲಾ ಪ್ರವಾಸದ ಸಂದರ್ಭದಲ್ಲಿ ಕೆಳಕಂಡ ಅಂಶಗಳನ್ನು ಗಮನಿಸಿರುತ್ತಾರೆ. ರಾಜ್ಯದ ಗ್ರಾಮ ಪಂಚಾಯತಿಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಗ್ರಾಮೀಣ ರಸ್ತೆಗಳು, ಜಿಲ್ಲಾ ರಸ್ತೆಗಳು, ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಅಕ್ಕಪಕ್ಕದಲ್ಲಿ ಕಸ, ಒಣ ತ್ಯಾಜ್ಯ ಹೋಟೆಲ್ ತ್ಯಾಜ್ಯ ಕಟ್ಟಡ ತ್ಯಾಜ್ಯ, ಪ್ಲಾಸ್ಟಿಕ್ ಇತರೆ ತ್ಯಾಜ್ಯಗಳನ್ನು ಸುರಿದಿದ್ದು. ಮಳೆಗಾಲದಲ್ಲಿ ಈ ಕಸದ ರಾಶಿಗಳಲ್ಲಿ ನೀರು ನಿಂತು ಸೊಳ್ಳೆಗಳ ಉತ್ಪತ್ತಿಯಿಂದ ಸಾಂಕ್ರಾಮಿಕ ಕಾಯಿಲೆಗಳಿಗೆ ಕಾರಣವಾಗುತ್ತಿದ್ದು ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ದನಕರುಗಳು ಪ್ಲಾಸ್ಟಿಕ್ ತ್ಯಾಜ್ಯ ತಿಂದು ಅವುಗಳ ಪ್ರಾಣಕ್ಕೆ ಅಪಾಯವಾಗಿರುವ ಘಟನೆಗಳು ವರದಿಯಾಗುತ್ತಿವೆ.

ರಸ್ತೆ ಬದಿ ತ್ಯಾಜ್ಯ ಎಸೆಯದಂತೆ ನೋಡಿಕೊಳ್ಳುವುದು ಹಾಗೂ ವೈಜ್ಞಾನಿಕವಾಗಿ ತ್ಯಾಜ್ಯ ವಿಲೇವಾರಿ ಮಾಡುವುದು ಗ್ರಾಮ ಪಂಚಾಯತಿಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿದ್ದು, ರಸ್ತೆ ಬದಿ ತ್ಯಾಜ್ಯ ಎಸೆಯದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಹಾಗೂ ತ್ಯಾಜ್ಯ ನಿರ್ವಹಣಾ ಘಟಕಗಳ ಮೂಲಕ ಸಮರ್ಪಕ ಕಸ ವಿಲೇವಾರಿ/ ನಿರ್ವಹಣೆಗೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕೂಡಲೇ ಕಾರ್ಯೋನ್ಮುಖರಾಗುವುದು. ಈ ಕಾರ್ಯದಲ್ಲಿ ಯಾವುದೇ ಅಧಿಕಾರಿ/ಸಿಬ್ಬಂದಿ ಯಿಂದ ನಿರ್ಲಕ್ಷತೆಯ ಬಗ್ಗೆ ವರದಿಯಾದಲ್ಲಿ ಅವರುಗಳ ವಿರುದ್ಧ ಗಂಭೀರ ಶಿಸ್ತು ಕ್ರಮ ತೆಗೆದುಕೊಳ್ಳುವಂತೆ ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ರವರು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ. ಅದರಂತೆ ಅತಿ ತುರ್ತಾಗಿ ಸೂಕ್ತ ಕ್ರಮವಹಿಸಿ ಈ ಕಛೇರಿಗೆ ವರದಿ ಸಲ್ಲಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ,

ಯೋಜನಾ ನಿರ್ದೇಶಕರು
ಹಾಗೂ ಎಸ್.ಬಿ.ಎಮ್ (ಗ್ರಾ) ನೋಡಲ್ ಅಧಿಕಾರಿಗಳು
ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ

ಪ್ರತಿಯನ್ನು:

1. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಬೆಂಗಳೂರು ರವರ ಮಾಹಿತಿಗಾಗಿ.
2. ಕಾರ್ಯನಿರ್ವಾಹಕ ಅಧಿಕಾರಿಗಳ ಮುಂಖಾತರ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.